ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (67) 50
ಸದಸ್ಯರ ಹೆಸರು : ಶ್ರೀ ಹೆಚ್. ಎಮ್. ರಮೇಶಗೌಡ
ಉತ್ತರಿಸುವ ದಿನಾಂಕ : 15.07.2019
ಉತ್ತರಿಸುವವರು : ಮಾನ್ಯ ಸಮಾಜ ಕಲ್ಯಾಣ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕಳೆದ ಮೂರು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶೀಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಸಮಗ್ರ ಅಭಿವೃದ್ಧಿ ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದಲ್ಲಿ . ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು:	ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉಪಯೋಜನೆ ಅಧಿನಿಯಮ ಮತ್ತು ನಿಯಮಗಳಡಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.
ಆ)	ಉತ್ತರ ಕರ್ನಾಟಕ ಹೈದರಾಬಾದ್ ಕರ್ನಾಟಕ ಪ್ರದೇಶಗಳಿಗೆ ಇಲಾಖೆಯಿಂದ ಕಳೆದ ಮೂರು ವರ್ಷಗಳಿಂದ ಮಂಜೂರಾದ ಅನುದಾನವೆಷ್ಟು:	ಉತ್ತರ ಕರ್ನಾಟಕ, ಹೈದರಾಬಾದ್ ಕರ್ನಾಟಕ ಕಳೆದ ಮೂರು ವರ್ಷಗಳಲ್ಲಿ ರೂ.4849.74 ಕೋಟಿಗಳನ್ನು ಮಂಜೂರು ಮಾಡಲಾಗಿದೆ.
ಇ)	ರಾಜ್ಯದ ವಿವಿಧ ಪ್ರದೇಶಗಳಲ್ಲಿ ಕಳೆದ ಮೂರು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಯಿಂದ ದಲಿತರ ಕ್ಷೇಮಾಭಿವೃದ್ದಿಗೆ ಬಿಡುಗಡೆಯಾದ ಹಣವೆಷ್ಟು:	ರಾಜ್ಯದ ವಿವಿಧ ಪ್ರದೇಶಗಳಲ್ಲಿ ದಲಿತರ ಕ್ಷೇಮಾಭಿವೃದ್ಧಿಗೆ ಕಳೆದ ಮೂರು ವರ್ಷಗಳಲ್ಲಿ ರೂ.8647.52 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.
ಈ)	ಅಂಬೇಡ್ಕರ್ ವಸತಿ ಶಾಲೆಗಳ ನಿರ್ವಹಣೆ ಹಾಗೂ ಸದ್ಯದ ಸ್ಥಿತಿಗತಿಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು?	ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಘದ ಅಧೀನದಲ್ಲಿ 125 ಅಂಬೇಡ್ಕರ್ ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಈ ವಸತಿ ಶಾಲೆಗಳಲ್ಲಿ 86 ವಸತಿ ಶಾಲೆಗಳು ಬಾಡಿಗೆ ಕಟ್ಟಡಗಳಲ್ಲಿ ಮತ್ತು 39 ವಸತಿ ಶಾಲೆಗಳು ಬಾಡಿಗೆ ರಹಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. ಇವುಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ.

ಸಕಇ 01 ಸ್ಲೀಮರ 2019

(ಪ್ರಿಯಾಂಕ್ ಖರ್ಗೆ)
ಸಮಾಜ ಕಲ್ಯಾಣ ಸಚಿವರು.